# <u>ಕರ್ನಾಟಕ ಸರ್ಕಾರದ ನಡವಳಿಗಳು</u>

**<u>ವಿಷಯ:-</u>** ಧಾರವಾಡ ಕೃಷಿ ವಿಶ್ವವಿದ್ಯಾಲಯಕ್ಕೆ 2013-14ನೇ ಸಾಲಿನ 3ನೇ ತ್ರೈಮಾಸಿಕ ಯೋಜನಾ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**<u>ಓದಲಾಗಿದೆ:-</u>** 1) ಸರ್ಕಾರದ ಆದೇಶ ಸಂಖ್ಯೆ: ಕೃಇ 18 ಕೃವಿಧಾ 2013 ದಿನಾಂಕ: 31-05-2013.

2) ಸರ್ಕಾರದ ಆದೇಶ ಸಂಖ್ಯೆ: ಕೃಇ 18 ಕೃವಿಧಾ 2013, ದಿನಾಂಕ: 21-09-2013.

3) ಧಾರವಾಡ ಕೃಷಿ ವಿಶ್ವವಿದ್ಯಾಲಯದ ದಿನಾಂಕ: 08-10-2013ರ ಹನಿಅ/ಯೋಜನೆ ಅನು/2013-14.

**** *** ****

**<u>ಪ್ರಸ್ತಾವನೆ:-</u>**

2013-14ನೇ ಸಾಲಿನ ಆಯವ್ಯಯದಲ್ಲಿ ಧಾರವಾಡ ಕೃಷಿ ವಿಶ್ವವಿದ್ಯಾಲಯಕ್ಕೆ (ಯೋಜನೆ) ಕೃಷಿ ಶಿಕ್ಷಣ ಉದ್ದೇಶಕ್ಕಾಗಿ ಲೆಕ್ಕ ಶೀರ್ಷಿಕೆ 2415-80-277-2-01-101 ಅಡಿಯಲ್ಲಿ ರೂ. 1436.25 ಲಕ್ಷಗಳ ಅನುದಾನವನ್ನು ಹಾಗೂ ಕೃಷಿ ಸಂಶೋಧನೆ ಉದ್ದೇಶಕ್ಕಾಗಿ ಲೆಕ್ಕ ಶೀರ್ಷಿಕೆ 2415-80-004-2-01(ಸಹಾಯಧನ-101) ಅಡಿಯಲ್ಲಿ ರೂ. 1150.00 ಲಕ್ಷಗಳ ಸಹಾಯಾನುಧಾನವನ್ನು ಹಂಚಿಕೆ ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ 1 ಹಾಗೂ 2ರ ಆದೇಶಗಳಲ್ಲಿ ಧಾರವಾಡ ಕೃಷಿ ವಿಶ್ವವಿದ್ಯಾಲಯಕ್ಕೆ (ಯೋಜನೆ) ಕೃಷಿ ಶಿಕ್ಷಣ ಉದ್ದೇಶಕ್ಕಾಗಿ 2415-80-277-2-01-101 ಅಡಿಯಲ್ಲಿ ಒದಗಿಸಲಾದ ರೂ. 1436.25 ಲಕ್ಷಗಳ ಪೈಕಿ ಒಟ್ಟು ರೂ. (400.00 + 318.12) 718.12 ಲಕ್ಷಗಳನ್ನು ಹಾಗೂ ಕೃಷಿ ಸಂಶೋಧನೆ ಉದ್ದೇಶಕ್ಕಾಗಿ 2415-80-004-2-01 (ಸಹಾಯಾನುದಾನ 101) ಅಡಿಯಲ್ಲಿ ಒದಗಿಸಲಾದ ರೂ. 1150.00 ಲಕ್ಷಗಳ ಅನುದಾನದ ಪೈಕಿ ಒಟ್ಟು ರೂ. (325.00 + 250.00) 575.00 ಲಕ್ಷಗಳನ್ನು ಧಾರವಾಡ ಕೃಷಿ ವಿಶ್ವವಿದ್ಯಾಲಯಕ್ಕೆ ಈಗಾಗಲೇ ಬಿಡುಗಡೆ ಮಾಡಲಾಗಿರುತ್ತದೆ.

2013-14ನೇ ಸಾಲಿನ ಅನುದಾನದ ಪೈಕಿ 1ನೇ ಹಾಗೂ 2ನೇ ತ್ರೈಮಾಸಿಕ ಅನುದಾನವನ್ನು ನಿಗದಿಪಡಿಸಲಾದ ಉದ್ದೇಶಗಳಿಗೆ ಬಳಕೆ ಮಾಡಿರುವ ಬಗ್ಗೆ ಬಳಕೆ ಪ್ರಮಾಣ ಪತ್ರವನ್ನು ಲಗತ್ತಿಸಿ ಮೇಲೆ (3)ರಲ್ಲಿ ಓದಲಾದ ದಿನಾಂಕ: 08-10-2013ರ ಪತ್ರದಲ್ಲಿ ಧಾರವಾಡ ಕೃಷಿ ವಿಶ್ವವಿದ್ಯಾಲಯದ ಹಣಕಾಸು ನಿಯಂತ್ರಣಾಧಿಕಾರಿಗಳು ಯೋಜನೆ ಅನುದಾನದ 3ನೇ ತ್ರೈಮಾಸಿಕ ಕಂತಿನ ಅನುದಾನವಾದ ರೂ. 359.00 ಲಕ್ಷಗಳನ್ನು ಕೃಷಿ ಶಿಕ್ಷಣ ಲೆಕ್ಕ ಶೀರ್ಷಿಕೆ 2415-80-277-2-01 ಸಹಾಯಾನುದಾನ 101

ಅಡಿ ಹಾಗೂ ರೂ. 287.50 ಲಕ್ಷಗಳನ್ನು ಕೃಷಿ ಸಂಶೋಧನೆ ಲೆಕ್ಕ ಶೀರ್ಷಿಕೆ 2415-80-004-2-01 ಸಹಾಯಾನುದಾನ 101ಅಡಿ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕೃಇ 18 ಕೃವಿಧಾ 2013, ಬೆಂಗಳೂರು, ದಿನಾಂಕ: 19-11-2013**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ ಯೋಜನೆ ಅಡಿಯಲ್ಲಿ ಧಾರವಾಡ ಕೃಷಿ ವಿಶ್ವವಿದ್ಯಾಲಯಕ್ಕೆ 2013-14ನೇ ಸಾಲಿಗೆ ಕೃಷಿ ಶಿಕ್ಷಣ ಲೆಕ್ಕಶೀರ್ಷಿಕೆ 2415-80-277-2-01 ಸಹಾಯಾನುದಾನ 101 ಅಡಿಯಲ್ಲಿ ಹಂಚಿಕೆ ಮಾಡಲಾದ ರೂ. 1436.25 ಲಕ್ಷಗಳ ಪೈಕಿ 359.00 ಲಕ್ಷಗಳನ್ನು ಹಾಗೂ ಕೃಷಿ ಸಂಶೋಧನೆ ಲೆಕ್ಕಶೀರ್ಷಿಕೆ 2415-80-004-2-01 (ಸಹಾಯಾನುದಾನ 101) ಅಡಿಯಲ್ಲಿ ಹಂಚಿಕೆ ಮಾಡಲಾದ ರೂ. 1150.00 ಲಕ್ಷಗಳ ಪೈಕಿ 287.50 ಲಕ್ಷಗಳಂತೆ ಒಟ್ಟು ರೂ. 646.50 ಲಕ್ಷ (ಆರು ನೂರ ನಲವತ್ತ ಆರು ಲಕ್ಷದ ಐವತ್ತು ಸಾವಿರ ಮಾತ್ರ) ಗಳನ್ನು ಮೂರನೇ ತ್ರೈಮಾಸಿಕ ಯೋಜನೆ ಅನುದಾನವಾಗಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ:-

1. **ಪ್ರತಿ ತಿಂಗಳ ಅನುದಾನವನ್ನು ಆಯಾ ತಿಂಗಳ 20ನೇ ತಾರೀಖಿನಂದು ಅಥವಾ 20ನೇ ತಾರೀಖಿನ ನಂತರ ಹಿಂದಿನ ತಿಂಗಳ ಬಳಕೆ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು;**
2. **ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು;**
3. **ಬಿಡುಗಡೆಯಾದ ಯೋಜನಾ ಅನುದಾನದ ಸಂಶೋಧನೆಯ ಪೈಕಿ ಶೇ. 50ರಷ್ಟು ಹಣವನ್ನು ಸಂಶೋಧನೆ ಮತ್ತು ಅಭಿವೃದ್ಧಿಯ ಉದ್ದೇಶಗಳಿಗೆ ವಿನಿಯೋಗಿಸತಕ್ಕದ್ದು.**
4. **ಸರ್ಕಾರವು ನೀಡಿದ ಸೂಚನೆ, ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ಯೋಜನೆಯ ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು;**
5. **ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು;**
6. **ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ;**
7. **ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು.**

...3

2. ಬಿಡುಗಡೆಯಾಗಿರುವ ಅನುದಾನಕ್ಕೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ, ಇವರು ಸಲ್ಲಿಸುವ ಬಿಲ್ಲಿಗೆ ಮೇಲು ರುಜು ಮಾಡುವ ಅಧಿಕಾರವನ್ನು Regional Joint Director of Collegiate Education, Dharwad, ಇವರಿಗೆ ನೀಡಲಾಗಿದೆ.

3. ಈ ಆದೇಶವನ್ನು ಆರ್ಥಿಕ ಇಲಾಖೆಯು ದಿನಾಂಕ: 10-05-2013 ಹಾಗೂ 16-11-2013ರ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2013ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

**(ಮಂಜುನಾಥ್ ಪಾಟೀಲ್)**
**ಸರ್ಕಾರದ ಅಧೀನ ಕಾರ್ಯದರ್ಶಿ**
**ಕೃಷಿ ಇಲಾಖೆ (ಸೇವೆಗಳು)**
**(ದೂರವಾಣಿ ಸಂಖ್ಯೆ: 080 2203 2344)**

**ಇವರಿಗೆ:-**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಪ್ರಕಟಿತ 15 ಪ್ರತಿಗಳನ್ನು ಒದಗಿಸಲು.

**ಪ್ರತಿ:-**

1. ಮಹಾಲೇಖಪಾಲರು, (ಲೆಕ್ಕಪತ್ರ/ತನಿಖೆ) ಕರ್ನಾಟಕ, ಬೆಂಗಳೂರು.
2. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ.
3. ಕೃಷಿ ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
4. ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ.
5. ಉಪ ನಿರ್ದೇಶಕರು, ನೆಟ್‌ವರ್ಕ್ ಮೇನೇಜ್‌ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.
6. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಧಾರವಾಡ.
7. ಜಿಲ್ಲಾ ಖಜಾನಾಧಿಕಾರಿಗಳು, ಧಾರವಾಡ.
8. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ, ತೋಟಗಾರಿಕೆ, ರೇಷ್ಮೆ, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಗಳು, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 & 5), ವಿಧಾನ ಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.